ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಇ-ಹರಾಜು ಪ್ರಕ್ರಿಯೆ ಕುರಿತು

ಶ್ರೀ ಎನ್. ರವಿಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು):-

1575(1810) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಎಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳಲ್ಲಿ ಇ-ಹರಾಜು ಪ್ರಕ್ರಿಯೆ ನಡೆಯುತ್ತಿದೆ ; ಭಾರತದ ಸರ್ಕಾರದ ಇ-ನ್ಯಾಮ್ ಮತ್ತು ಕರ್ನಾಟಕ ಸರ್ಕಾರದ ಇ-ಮಾರ್ಕೆಟ್ ವ್ಯವಸ್ಥೆಯಲ್ಲಿನ ವ್ಯತ್ಯಾಸಗಳೇನು ;

(ಆ) ಭಾರತ ಸರ್ಕಾರದ ಇ-ನ್ಯಾಮ್ ವ್ಯವಸ್ಥೆಯನ್ನು ಅಳವಡಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆಯೇ ; ಇಲ್ಲವಾದಲ್ಲಿ ಕಾರಣಗಳೇನು;

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಕೃಷಿ ಉತ್ಪನ್ನ ಮಾರುಕಟ್ಟೆಗಳಿವೆ ; ಅದರಲ್ಲಿ ಎಷ್ಟು ಮಾರುಕಟ್ಟೆಗಳು ಮಾರುಕಟ್ಟೆ ವ್ಯವಸ್ಥೆಯನ್ನು ಅಳವಡಿಸಿಕೊಂಡಿದೆ ? (ಜಿಲ್ಲಾವಾರು ಮಾಹಿತಿ ನೀಡುವುದು)